ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	31(82)
ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	02-03-2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;	801
ಆ)	ಉಪ ಪ್ರಾಂಶುಪಾಲರ ಹುದ್ದೆ ಇಲ್ಲದೆ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;	423
ಇ)	ಉಪ ಪ್ರಾಂಶುಪಲರ ಹುದ್ದೆ ಇಲ್ಲದೆ ಇರುವ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗದಲ್ಲಿ ಆಡಳಿತ ನಿರ್ವಹಣೆಗೆ ತುಂಬಾ ಅಡ್ಡಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಈ)	ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಉಪ ಪ್ರಾಂಶುಪಾಲರ ಹುದ್ದೆಯನ್ನು ಸೃಜಿಸದಿರಲು ಇರುವ ಕಾನೂನಿನ ತೊಡಕುಗಳೇನು; (ವಿವರಗಳೊಡನೆ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ:ಇಡಿ 115 ಡಿಪಿಐ 96 ದಿನಾಂಕ:12-08-1998ರಲ್ಲಿ ಸರ್ಕಾರಿ ಶಾಲೆಗಳ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 750 ವಿದ್ಯಾರ್ಥಿಗಳಿದ್ದಲ್ಲಿ ಹಾಗೂ ಇದರಲ್ಲಿ ಪ್ರೌಢ ಶಾಲಾ ವಿಭಾಗದಲ್ಲಿ 400ಕ್ಕಿಂತ ಕಡಿಮೆ ಇಲ್ಲದ ಹಾಗೂ ಪದವಿ ಪೂರ್ವ ವಿಭಾಗದಲ್ಲಿ 150 ವಿದ್ಯಾರ್ಥಿಗಳು ಇರುವಲ್ಲಿ ಮಾತ್ರ ಉಪ ಪ್ರಾಂಶುಪಾಲರ ಹುದ್ದೆ ಮಂಜೂರಾಗಿರುತ್ತದೆ.
ಉ)	ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದಲ್ಲಿ ಹಿರಿಯ ಶಿಕ್ಷಕರು ಪ್ರಭಾರಿ ಮುಖ್ಯ ಶಿಕ್ಷಕರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಇವರಿಗೆ ಪ್ರಭಾರ ಭತ್ಯೆಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ ರಾಜ್ಯದ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರೌಢ ಶಾಲಾ ವಿಭಾಗದಲ್ಲಿ ಉಪ ಪ್ರಾಂಶುಪಾಲರ ಹುದ್ದೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳಿಗೆ ಪ್ರಭಾರ ವಹಿಸಿರುವ ಹಿರಿಯ ಶಿಕ್ಷಕರಿಗೆ ಕೆ.ಸಿ.ಎಸ್.ಆರ್. ನಿಯಮ 68ರಡಿಯಲ್ಲಿ ಪ್ರಭಾರ ಭತ್ಯೆ ಕಾಲಕಾಲಕ್ಕೆ ಮಂಜೂರು ಮಾಡಲಾಗುತ್ತಿದೆ

ಊ)	ಹಾಗಿದ್ದಲ್ಲಿ, ಪ್ರಭಾರ ಭತ್ಯೆಯನ್ನು ನೀಡಲು ಸರ್ಕಾರ ಇದುವರೆವಿಗೆ ತೆಗೆದುಕೊಂಡ ಕ್ರಮಗಳೇನು?	ಮೇಲಿನಂತೆ ಹುದ್ದೆಗಳು ಮಂಜೂರಾಗಿರುವ ಕಡೆ ಪ್ರಭಾರ ಭತ್ಯೆ ನೀಡುತ್ತಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ: ಇಡಿ 30 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.